# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವರದರಾಜ ಚಾರಿಟಬಲ್ ಟ್ರಸ್ಟ್ (ರಿ), ತುಮಕೂರು ಇವರು ವರದರಾಜ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಅಂಡ್ ಎಜುಕೇಷನ್ ಅಂಡ್ ರಿಸರ್ಚ್ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/298/ಯೋಜನೆ/2018-19, ದಿನಾಂಕ:29.08.2020.
2. ದಿನಾಂಕ:18.09.2020ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಗಳು.

*****

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರ.ಸಂ (1)ರ ವರದಿಯಲ್ಲಿ, ಔಷಧ ನಿಯಂತ್ರಕರು, ರಾಜ್ಯ ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ವರದರಾಜ ಚಾರಿಟಬಲ್ ಟ್ರಸ್ಟ್ (ರಿ), ತುಮಕೂರು ಇವರು ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯಂತೆ ಸದರಿ ಸಂಸ್ಥೆಯು ಶೆಟ್ಟಿಹಳ್ಳಿ ಔಟರ್ ರಿಂಗ್ ರಸ್ತೆ, ಮಿನಿ ಮಾರ್ಕೆಟ್ ಹಿಂಭಾಗ, ಟುಡಾ ಲೇಔಟ್, ತುಮಕೂರು ಇಲ್ಲಿ ಸ್ವಂತ ಕಟ್ಟಡವನ್ನು ಹಾಗೂ ಒಟ್ಟು 2.15 ಎಕರೆ ಭೂಮಿಯನ್ನು ಹೊಂದಿರುತ್ತದೆ. ಸದರಿ ಕಟ್ಟಡವು ಡಿ.ಫಾರ್ಮಸಿ ಕೋರ್ಸ್ ನಡೆಸಲು ಸೂಕ್ತವಾಗಿದ್ದು, 60 ವಿದ್ಯಾರ್ಥಿಗಳ ಪ್ರಥಮ ಡಿ.ಫಾರ್ಮಸಿ ತರಗತಿಗಳನ್ನು ಚಾಲನೆ ಮಾಡಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಂದಿರುವುದರಿಂದ, ಭಾರತೀಯ ಫಾರ್ಮಸಿ ಪರಿಷತ್ತು, ನವದೆಹಲಿ ಇವರಿಂದ 2019-20 ಮತ್ತು 2020-21ನೇ ಶೈಕ್ಷಣಿಕ ಸಾಲಿಗೆ ಅನುಮೋದನೆ ಪಡೆದಿರುವುದರಿಂದ, ವರದರಾಜ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಅಂಡ್ ಎಜುಕೇಷನ್ ಅಂಡ್ ರೀಸರ್ಚ್ ಎಂಬ ಹೆಸರಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಕುರಿತು ಕ್ರಮ ಕೈಗೊಳ್ಳಬಹುದಾಗಿದೆ ಎಂದು ಅಭಿಪ್ರಾಯ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಈ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ಶಿಫಾರಸು ಮಾಡಲಾಗಿದೆ.

ಔಷಧ ನಿಯಂತ್ರಕರ (ಪ್ರ) ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ವರದರಾಜ ಚಾರಿಟಬಲ್ ಟ್ರಸ್ಟ್ (ರಿ), ತುಮಕೂರು ಇವರು ವರದರಾಜ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಅಂಡ್ ಎಜುಕೇಷನ್ ಅಂಡ್ ರಿಸರ್ಚ್ ಎಂಬ ಹೆಸರಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಪ್ರಥಮ ಡಿ.ಫಾರ್ಮಸಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು

7.10.2020

. . . 2

ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 49 ಪಿಟಿಡಿ 2019, ಬೆಂಗಳೂರು, ದಿನಾಂಕ:07.10.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವರದರಾಜ ಚಾರಿಟಬಲ್ ಟ್ರಸ್ಟ್ (ರಿ), ತುಮಕೂರು ಇವರು ಶೆಟ್ಟಿಹಳ್ಳಿ ಔಟರ್ ರಿಂಗ್‌ರಸ್ತೆ, ಮಿನಿ ಮಾರ್ಕೆಟ್ ಹಿಂದುಗಡೆ, ಟುಡಾ ಲೇಔಟ್, ತುಮಕೂರು ಇಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ವರದರಾಜ ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕಲ್ ಅಂಡ್ ಎಜುಕೇಷನ್ ಅಂಡ್ ರಿಸರ್ಚ್ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
9. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಔಷಧ ನಿಯಂತ್ರಕರು ಖಚಿತಪಡಿಸಿಕೊಳ್ಳುವುದು.
10. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

೭.೧೦.೨೦೨೦
(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

**ಇವರಿಗೆ:**

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.

2) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
4) ವ್ಯವಸ್ಥಾಪಕ ಧರ್ಮದರ್ಶಿ, ವರದರಾಜ ಚಾರಿಟಬಲ್ ಟ್ರಸ್ಟ್ (ರಿ), ಶೆಟ್ಟಿಹಳ್ಳಿ ಔಟರ್ ರಿಂಗ್ ರಸ್ತೆ, ಮಿನಿ ಮಾರ್ಕೆಟ್ ಹಿಂಭಾಗ, ಟುಡಾ ಲೇಔಟ್, ತುಮಕೂರು.

ಪ್ರತಿಗಳು:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.